ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-05

ಸಂಖ್ಯೆ: ಎಸಿ4/01/2025-26

ದಿನಾಂಕ 09-09-2025

## ಸುತ್ತೋಲೆ

ವಿಷಯ: 2025-26ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಸ್ನಾತಕ ಪದವಿ ಪ್ರವೇಶಾತಿಗಳಿಗೆ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಸಮಸಂಖ್ಯೆ ಸುತ್ತೋಲೆ ದಿನಾಂಕ 02-09-2025.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯ-1) ಬಹುಮಹಡಿ ಕಟ್ಟಡ, ಬೆಂಗಳೂರು ಅವರ ಪತ್ರ ಸಂಖ್ಯೆ:ಇಡಿ 216 ಯುಎನ್‌ಇ 2025 ದಿನಾಂಕ 03-09-2025

*****

ಉಲ್ಲೇಖ(1)ರ ವಿಶ್ವವಿದ್ಯಾನಿಲಯದ ಸುತ್ತೋಲೆಯಲ್ಲಿ ಸ್ನಾತಕ ಪದವಿಯ ಪ್ರಥಮ ವರ್ಷದ ಪ್ರವೇಶಾತಿಗೆ ರೂ.500/- ದಂಡ ಶುಲ್ಕದೊಂದಿಗೆ ದಿನಾಂಕ: 10-09-2025ನ್ನು ಕೊನೆಯ ದಿನಾಂಕವಾಗಿ ನಿಗದಿಪಡಿಸಲಾಗಿತ್ತು. ಪ್ರಸ್ತುತ, ಉಲ್ಲೇಖ (2)ರ ಸರ್ಕಾರದ ಸುತ್ತೋಲೆಯಲ್ಲಿನ ನಿರ್ದೇಶನದ ಅನುಸಾರ ದಂಡಶುಲ್ಕರಹಿತವಾಗಿ ದಿನಾಂಕ 15-09-2025ರವರೆಗೂ ಸ್ನಾತಕ ಪದವಿ ಪ್ರಥಮ ವರ್ಷಕ್ಕೆ ಪ್ರವೇಶಾತಿ ದಿನಾಂಕವನ್ನು ಈ ಕೆಳಕಂಡ ನಿಬಂಧನೆಗೊಳಪಟ್ಟು ವಿಸ್ತರಿಸಲಾಗಿದೆ.

1. ವಿಶ್ವವಿದ್ಯಾನಿಲಯವು ಸರ್ಕಾರದ ನಿರ್ದೇಶಾನುಸಾರ ಹೊರಡಿಸಿರುವ ಸ್ನಾತಕ ಪದವಿಯ ಶೈಕ್ಷಣಿಕ ವೇಳಾಪಟ್ಟಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
2. ದಿನಾಂಕ ವಿಸ್ತರಣೆಯಾಗಿರುವ ಅವಧಿಯಲ್ಲಿ ಪ್ರವೇಶ ಹೊಂದಿದ ವಿದ್ಯಾರ್ಥಿಗಳಿಗೆ ಯಾವುದೇ ಹೆಚ್ಚುವರಿ ಶುಲ್ಕ ವಿಧಿಸದೇ Bridge course ಮೂಲಕ ತರಗತಿಗಳನ್ನು ನಡೆಸಿ, ವಿದ್ಯಾರ್ಥಿಗೆ ಪರೀಕ್ಷೆ ತೆಗೆದುಕೊಳ್ಳಲು ಅನುವು ಮಾಡಿಕೊಡತಕ್ಕದ್ದು.
3. ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ offlineನಲ್ಲಿ ಶುಲ್ಕ ಪಾವತಿಸಿಕೊಂಡು ವಿವರಗಳನ್ನು UUCMS Portalನಲ್ಲಿ upload ಮಾಡಿ ಪ್ರವೇಶಾತಿ ಅನುಮೋದನೆಗೆ ಸಲ್ಲಿಸುವುದು.
4. ವಿಸ್ತರಿಸಿದ ದಿನಾಂಕದಲ್ಲಿ ಪ್ರವೇಶಾತಿ ಹೊಂದಿದ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ದಿನಾಂಕ 18-09-2025 ಒಳಗೆ ಅನುಮೋದಿಸಿಕೊಳ್ಳತಕ್ಕದ್ದು.

Sd/- 09/09.
ಉಪಕುಲಸಚಿವರು(ಶೈಕ್ಷಣಿಕ)
ಉಪಕುಲಸಚಿವರು (ಶೈಕ್ಷಣಿಕ)
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಇವರಿಗೆ;

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ
2. ಕುಲಸಚಿವ(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು – ಪ್ರವೇಶಾತಿ ಅನುಮೋದನೆಯಾದ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷಾ ಪ್ರವೇಶ ಪತ್ರಗಳನ್ನು ವಿತರಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲು ತಿಳಿಸಿದೆ.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು – ಸಂಬಂಧಿಸಿದ ಖಾತೆಗಳಿಗೆ ಆಯಾ ಶುಲ್ಕಗಳನ್ನು ಪಾವತಿಸುವಂತೆ ಕಾಲೇಜುಗಳಿಗೆ ತಿಳಿಸಲಾಗಿದೆ. ಆದಾಗ್ಯೂ ಆಯಾ ಖಾತೆಗಳಿಗೆ ಅನುಗುಣವಾಗಿ ಚಲನ್‌ಗಳನ್ನು ತಕ್ಷಣ ಮುದ್ರಿಸಿ ಸಂಬಂಧಪಟ್ಟ ಬ್ಯಾಂಕುಗಳಿಗೆ/ಕಾಲೇಜುಗಳಿಗೆ ಒದಗಿಸಲು ತಿಳಿಸಿದೆ.
4. ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ/ವಾಣಿಜ್ಯ/ಕಲಾ ಮತ್ತು ಕಾನೂನು ನಿಕಾಯಗಳು, ಮೈ.ವಿ.ವಿ.ನಿಲಯ, ಮೈಸೂರು.
5. ನಿರ್ದೇಶಕರು, ಸ್ಕೂಲ್ ಆಫ್ ಲಾ, ಮಾನಸಗಂಗೋತ್ರಿ, ಮೈಸೂರು.
6. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮಾನಸಗಂಗೋತ್ರಿ, ಮೈಸೂರು.
7. ನಿರ್ದೇಶಕರು, ಅಂತರಾಷ್ಟ್ರೀಯ ಕೇಂದ್ರ, ವಿಶ್ವವಿದ್ಯಾನಿಲಯ ಲಲಿತ ಕಲೆಗಳ ಕಾಲೇಜು ಆವರಣ, ಮಾನಸಗಂಗೋತ್ರಿ, ಮೈಸೂರು.
8. ನಿರ್ದೇಶಕರು, ಪಿ.ಎಂ.ಇ. ಬೋರ್ಡ್, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನ ಕಛೇರಿ, ಮಾನಸಗಂಗೋತ್ರಿ, ಮೈಸೂರು.
10. ಸಂಯೋಜಕರು, ಐಸಿಡಿ, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕಾಗಿ ಕೋರಿದೆ.
11. ಉಪಕುಲಸಚಿವ/ಅಧೀಕ್ಷಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿಶೇಷ ಘಟಕ, ಮಹಾರಾಜ ಕಾಲೇಜು ಶತಮಾನೋತ್ಸವ ಭವನ ಕಟ್ಟಡ, ಮೈವಿವಿ, ಮೈಸೂರು.

12. ಸಂಬಂಧಪಟ್ಟ ಎಲ್ಲಾ ಉಪ ಕುಲಸಚಿವ/ಸಹಾಯಕ ಕುಲಸಚಿವ/ಅಧೀಕ್ಷಕರು/ಶೈಕ್ಷಣಿಕ ವಿಭಾಗದ ಎಲ್ಲಾ ವಿಷಯ ನಿರ್ವಾಹಕರಿಗೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈ.ವಿ.ವಿ, ಮೈಸೂರು.
14. ಕಛೇರಿ ಪ್ರತಿ.